# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 20-ಗಂಗಾನಗರ, ಬೆಂಗಳೂರು.

ಸಂಖ್ಯೆ: ಸ.ಅ/ವಾ-20/ಪಿ.ಆರ್/06/2020-21 ದಿನಾಂಕ:24-12-2020.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ:05-12-2020. ರವರ ಆದೇಶದಂತೆ ದಿನಾಂಕ: 22-12-2020 ರಂದು 11.30 ಗಂಟೆಗೆ ಬೆಳಗ್ಗೆ ವಾರ್ಡ್ ನಂ:20 ಗಂಗಾನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಶ್ರೀ ಬಿ.ಎಸ್ ಪ್ರಹಲಾದ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.20 |
| 03 | ಶ್ರೀನಿವಾಸ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾಡ್ ನಂ: 20, ಸದಸ್ಯರು |
| 04 | ಸುವರ್ಣ ದೇವಿ | ಸದಸ್ಯರು |
| 05 | ಭವ್ಯ ಅನು ಎ.ವಿ | ವಕೀಲರು |
| 06 | ರವಿ ಆರ್ | ಆರ.ಬಿ ಐ ಕಾಲೋನಿ |
| 07 | ಶಲೀನಿ | ಆರ.ಡಬ್ಲ್ಯೂ.ಎ |
| 08 | ಜಗನಾಥ್ | ಸಾರ್ವಜನಿಕರು |
| 09 | ಸೌದರ್ ರಾಜ್ | ಸಾರ್ವಜನಿಕರು |
| 10 | ಆನಂದ ಪಿ.ಸಿ | ಜೆ.ಇ ವಿದ್ಯುತ್ ವಿಭಾಗ ಬಿಬಿಎಂಪಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ. ಬಿ.ಎಸ್ ಪ್ರಹಲಾದ್ ಮತ್ತು ಕಾರ್ಯದರ್ಶಿಗಳಾದ ಶ್ರೀ ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ: 20 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ವಾರ್ಡ್ ಸಂಖ್ಯೆ 20 ರ ವ್ಯಾಪ್ತಿಯ ಮನೆ ಮನೆಯಿಂದ ಕಸ ಸಂಗ್ರಹಣೆ ಮಾಡುತ್ತಿರುವ ಆಟೋ ಚಾಲಕರು ಸಮರ್ಪಕವಾಗಿ ಕಾರ್ಯನಿವಹಿಸುತ್ತಿಲ್ಲವೆಂದು ಸಾರ್ವಜನಿಕರುಗಳು ದೂರು ನೀಡಿರುವ ಬಗ್ಗೆ ಕ್ರಮ ವಹಿಸುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ/ ಕಿರಿಯ ಆರೋಗ್ಯ ಪರಿವೀಕ್ಷಕರು ರವರ ಸೂಚಿಸಲಾಯಿತು.
- ವಾರ್ಡ್ ಪ್ರದೇಶಗಳಲ್ಲಿನ ಆಟೋ ಟಿಪ್ಪರ್ ವಾಹನಗಳಿಗೆ ಮೈಕ್ ಅಳವಡಿಸಿ ಪ್ರಚಾರ ಮಾಡಲು ಸೂಚಿಸಲಾಯಿತು.
- ಕಸ ಸಂಗ್ರಹಣೆ ಮತ್ತು ಸಗಣಿಕೆಯ ಕೆಲಸವನ್ನು ಸರ್ಮಪಕವಾಗಿ ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣ ಕೋಶದ ಅಧಿಕಾರಿಗಳಿಗೆ ಸೂಚಿಸಲಾಯಿತು.
- ಖಾಲಿ ಸ್ಥಳಗಲ್ಲಿ ತ್ಯಾಜ್ಯವನ್ನು ಹಾಕುವುದರಿಂದ ಸುತ್ತಮುತ್ತಲಿನ ಸಾರ್ವಜನಿಕರುಗಳಿಗೆ ತುಂಬ ತೊಂದರೆಯಾಗುತ್ತಿರುವುದರಿಂದ ಅಂತಹ ಸ್ಥಳಗಳನ್ನು ಗುರುತಿಸಿ ಸ್ವಚ್ಚಗೊಳಿಸುವಂತೆ ಸೂಚಿಸಲಾಗಿದೆ.

- ವಾರ್ಡ್ ವ್ಯಾಪತಿಯಲ್ಲಿ ಕಸ ವಿಲೇವಾರಿ ಮಾಡದಿರುವು ಸಾರ್ವಜನಿಕರುಗಳಗೆ ದಂಡ ವಿದಿಸುವಂತೆ ಸೂಚಿಸಲಾಯಿತು.
- ಬೆಸ್ಕಾಂ ರವರು ವಿದ್ಯುತ್ ಕಂಬ್ಬಿಗೆ ತಗಲುವ ಮರದ ಕೊಂಬೆಗಳನ್ನು ಕಡಿತಗೊಳಸಿ ತಾವೆ ಸ್ವಚ್ಚಗೊಳಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ಪಾರ್ಕ್ ನಿರ್ವಹಣೆ ಮಾಡದಿರುವ ಬಗ್ಗೆ ಚರ್ಚಿಸಲಾಗಿ ನಿರ್ವಹಣೆಯ ಬಗ್ಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಗೆ ಸೂಚಿಸಿಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ಮಾಂಸ ಅಂಗಡಿಗಳಂದ ತ್ಯಾಜ್ಯವನ್ನು ರಸ್ತೆ ಬದಿಯಲ್ಲಿ ಹಾಕುತ್ತಿರುವುದರ ಬಗ್ಗೆ ಕ್ರಮ ವಹಿಸುವಂತೆ ವಾರ್ಡ್ ಮಾರ್ಷಲ್‌ಗೆ ಸೂಚಿಸಲಾಯಿತು.
- ಸಾರ್ವಜನಿಕರುಗಳಗೆ ಮಾಸ್ಕ್ ಧರಿಸಲು ಅರಿವು ಮೂಡಿಸುವ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು.
- 4ನೇ ಮತ್ತು 5ನೇ ಅಡ್ಡ ರಸ್ತೆಯ ಹೆಚ್.ಎಂ.ಟಿ ಬ್ಲಾಕ್‌ನಲ್ಲಿ ಒಳಚರಂಡಿ ಕೊಳಚೆ ನೀರು ಹೊರಬರುತ್ತಿರುವ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ರೆಸಿಡೆನ್ಸಿ ಆಟದ ಮೈದಾನವನ್ನು ಭದ್ರತೆ ಮಾಡುವಂತೆ ಸಂಬಂದಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
- ಸಾರ್ವಜನಿಕರುಗಳಗೆ ಮಾಸ್ಕ್ ದರಿಸಲು ಅರಿವು ಮೂಡಿಸಲು ಕಾರ್ಯಕ್ರಮ ಮಾಡುವಂತೆ ಆರೋಗ್ಯ ವೈದ್ಯಾದಿಕಾರಿಗಳಗೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಗೆ ಸಂಬಂಧಪಟ್ಟಂತೆ ಕೂಲಂಕುಶವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಪಲಾಯಿತು.

PKedam

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 20-ಗಂಗಾನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು 22/12/2020
ವಾರ್ಡ್ ನಂ: 20-ಗಂಗಾನಗರ

ಪ್ರತಿಯನ್ನು:-

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.